**ಕರ್ನಾಟಕ ಸರ್ಕಾರ**

ಸಂಖ್ಯೆ: ಡಿಟಿಇ 29 ಎಸಿಎಂ(2) 2017-18

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ: 30-06-2017.

**-:: ಸು ತ್ತೋಲೆ::-**

**ವಿಷಯ:** 2017-18ನೇ ಸಾಲಿನಲ್ಲಿ 02 ವರ್ಷಗಳ ಐಟಿಐ ಪಾಸಾದ ವಿದ್ಯಾರ್ಥಿಗಳಿಗೆ **ಲ್ಯಾಟರಲ್ ಎಂಟ್ರಿ ಸ್ಕೀಂ ಮುಖಾಂತರ** ನೇರವಾಗಿ 2ನೇ ವರ್ಷ / 3ನೇ ಸೆಮಿಸ್ಟರ್ ಡಿಪ್ಲೋಮಾ - **ಖಾಸಗಿ ಪಾಲಿಟೆಕ್ನಿಕ್‌ಗಳಿಗೆ** ಪ್ರವೇಶಾವಧಿಯನ್ನು ವಿಸ್ತರಿಸುವ ಬಗ್ಗೆ.

**ಉಲ್ಲೇಖ:** 1. ಈ ಕಛೇರಿಯ ಪ್ರವೇಶಾಧಿಸೂಚನೆಯ ದಿ:21-06-2017.
2. ಹಲವು ಖಾಸಗಿ ಪಾಲಿಟೆಕ್ನಿಕ್ ಪ್ರಿನ್ಸಿಪಾಲರುಗಳ ಮನವಿಗಳು.

-0000000-

2017-18ನೇ ಸಾಲಿನ 02 ವರ್ಷಗಳ ಐಟಿಐ ಪಾಸಾದ ವಿದ್ಯಾರ್ಥಿಗಳಿಗೆ ಲ್ಯಾಟರಲ್ ಎಂಟ್ರಿ ಸ್ಕೀಂ ಮುಖಾಂತರ 2ನೇ ವರ್ಷ / 3ನೇ ಸೆಮಿಸ್ಟರ್ ಡಿಪ್ಲೋಮಾ ಪ್ರವೇಶಕ್ಕೆ ಸಂಬಂಧಿಸಿದಂತೆ, ರಾಜ್ಯದ ಎಲ್ಲಾ ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿನ ಪ್ರವೇಶಕ್ಕೆ ಅಂತಿಮ ದಿನಾಂಕ:30-06-2017 ಎಂದು ಉಲ್ಲೇಖ(1)ರ ದಿನಾಂಕ21-06-2017ರಲ್ಲಿ ನಮೂದಿಸಿರುವ ಈ ಕಛೇರಿಯ ಪ್ರವೇಶಾಧಿಸೂಚನೆಯಲ್ಲಿ ನಿಗಧಿಪಡಿಸಲಾಗಿತ್ತು.

ಉಲ್ಲೇಖ(2)ರ ಪತ್ರಗಳಲ್ಲಿ ಅನೇಕ ಪಾಲಿಟೆಕ್ನಿಕ್‌ಗಳಲ್ಲಿ ಇನ್ನೂ ಅನೇಕ ಸ್ಥಾನಗಳು ಖಾಲಿ ಇರುವುದಾಗಿ ಸಂಬಂಧಿಸಿದ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರು ವರದಿ ಮಾಡಿ ವಿಸ್ತರಿಸಬೇಕೆಂದು ಕೋರಿರುವುದನ್ನು ಒಟ್ಟಾರೆ ಸಂಸ್ಥೆಗಳ ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಪರಿಗಣಿಸಿ **ಪ್ರವೇಶಾವಧಿಯನ್ನು ದಿನಾಂಕ: 15-07-2017ರವರೆಗೆ ವಿಸ್ತರಿಸಲಾಗಿದೆ.**

ಪ್ರಯುಕ್ತ, ಪ್ರವೇಶಾವಧಿಯನ್ನು ವಿಸ್ತರಿಸಲಾದ ಅವಧಿಯಲ್ಲಿ ಕರ್ನಾಟಕದಲ್ಲಿ 02 ವರ್ಷಗಳ ಐ.ಟಿ.ಐ ಉತ್ತೀರ್ಣತೆಯೊಂದಿಗೆ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಒಟ್ಟಾರೆ ಶೇ.35 ಅಂಕಗಳನ್ನು ಪಡೆದು ಉತ್ತೀರ್ಣರಾಗಿರಬೇಕು. ಪ್ರವೇಶಾವಧಿಯನ್ನು ವಿಸ್ತರಿಸಲಾದ ಅವಧಿಯಲ್ಲಿ ಪ್ರವೇಶ ಪಡೆದ ಅಭ್ಯರ್ಥಿಗಳ ಸಂಬಂಧದಲ್ಲಿ ನಿಯಮಾನುಸಾರ ಕನಿಷ್ಠ ಹಾಜರಾತಿಯನ್ನು ಪೂರೈಸುವ ಷರತ್ತಿಗೊಳಪಟ್ಟಿರುತ್ತದೆ. ಸದರಿ ಅಭ್ಯರ್ಥಿಗಳಿಗೆ 3ನೇ ಸೆಮಿಸ್ಟರ್ ಡಿಪ್ಲೋಮಾ ತರಗತಿಗಳನ್ನು ಪ್ರಾರಂಭಿಸಲು ಸೂಕ್ತ ವ್ಯವಸ್ಥೆ ಮಾಡುವುದಲ್ಲದೆ, ಮೇಲ್ಕಂಡ ವಿಸ್ತರಿಸಲಾದ ಅವಧಿಯಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ವಿಶೇಷ ತರಗತಿಗಳನ್ನು ತೆಗೆದುಕೊಳ್ಳುವುದರ ಮೂಲಕ ಪಠ್ಯಕ್ರಮದನ್ವಯ ನಿಗಧಿತ ಪಾಠ ಪ್ರವಚನಗಳನ್ನು ಮುಗಿಸುವಲ್ಲಿ ಕ್ರಮತೆಗೆದುಕೊಂಡು ನಿರ್ದೇಶನಾಲಯಕ್ಕೆ ವರದಿ ಮಾಡುವುದು.

**2ನೇ ವರ್ಷ / 3ನೇ ಸೆಮಿಸ್ಟರ್ ಡಿಪ್ಲೋಮಾ ಪ್ರವೇಶಾವಧಿಯನ್ನು ಪುನಃ ವಿಸ್ತರಿಸಲಾಗುವುದಿಲ್ಲ. ಪ್ರಯುಕ್ತ, ಇದನ್ನು ಆಯಾ ಪಾಲಿಟೆಕ್ನಿಕ್‌ನ ಪ್ರಿನ್ಸಿಪಾಲರು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ.**

**ವೆಬ್‌ಸೈಟ್: http://dte.kar.nic.in**

ನಿರ್ದೇಶಕರು

*ಎಲ್ಲಾ ಖಾಸಗಿ ಹಾಗೂ ಅನುದಾನಿತ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರಿಗೆ - ಮಾಹಿತಿಗಾಗಿ ಮತ್ತು ಸೂಕ್ತ ಅನುಸರಣೆಗಾಗಿ*

File 29-17(ITI_Laterla_Pvt – 2017-18)

<u>ಪ್ರತಿ:</u>

1. ಕಾರ್ಯದರ್ಶಿಯವರು, ತಾಂತ್ರಿಕ ಪರೀಕ್ಷಾ ಮಂಡಳಿ – **ದಿ:15–07–2017ವರೆಗೆ** ಅರ್ಹತಾ ಪ್ರಮಾಣ ಪತ್ರವನ್ನು ವಿತರಿಸುವ ಬಗ್ಗೆ ಸೂಕ್ತ ಕ್ರಮಕ್ಕಾಗಿ.
2. ನಿರ್ದೇಶಕರ ಆಪ್ತಶಾಖೆಗೆ.
3. ಸಾರ್ವಜನಿಕ ಸಂಪರ್ಕಾಧಿಕಾರಿಗಳು, ತಾ.ಶಿ.ನಿ
4. ಸಂಯೋಜನಾಧಿಕಾರಿಗಳು, ಇ–ಆಡಳಿತ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ. ಬೆಂಗಳೂರು – ಸದರಿ ಸುತ್ತೋಲೆಯನ್ನು ನಿರ್ದೇಶನಾಲಯದ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
5. ಇಆರ್‌ಎಸ್(3) ವಿಭಾಗಕ್ಕೆ. 6. ಕಛೇರಿ ಪ್ರತಿ.